# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1319 |
| ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್. ಕೆ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 19-03-2025 |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಅನುದಾನದ ಕೊರತೆ ಹಾಗೂ ಭೂಸ್ವಾಧೀನ ಪ್ರಕ್ರಿಯೆಯಲ್ಲಾಗುತ್ತಿರುವ ವಿಳಂಬ ಧೋರಣೆಯಿಂದ ಹಲವಾರು ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳು ದೀರ್ಘಕಾಲದಿಂದ ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಷ್ಟ್ರೀಯ ಹೆದ್ದಾರಿ ಬೆಂಗಳೂರು ವಲಯದ ವ್ಯಾಪ್ತಿಯಲ್ಲಿ ಬರುವ ರಾಷ್ಟ್ರೀಯ ಹೆದ್ದಾರಿಗಳ ಅಭಿವೃದ್ಧಿ ಕಾಮಗಾರಿಗಳಲ್ಲಿ ಭೂಸ್ವಾಧೀನ ಪ್ರಕ್ರಿಯೆಯಿಂದ ಕಾಮಗಾರಿ ಅನುಷ್ಠಾನದಲ್ಲಿ ವಿಳಂಬವಾದರೂ ಯಾವುದೇ ಕಾಮಗಾರಿಗಳು ನೆನೆಗುದಿಗೆ ಬಿದ್ದಿರುವುದಿಲ್ಲ. |
| ಆ) | ಒಂದರಿಂದ ಐದು ವರ್ಷಗಳ ಹಿಂದೆಯೇ ಪೂರ್ಣಗೊಳ್ಳಬೇಕಿದ್ದ ಹಲವಾರು ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳು ದೀರ್ಘಕಾಲದಿಂದ ನೆನೆಗುದಿಗೆ ಬಿದ್ದಿರುವುದನ್ನು ತಪ್ಪಿಸಲು ಸರ್ಕಾರ ಇದುವರೆಗೆ ಅಗತ್ಯ ಸೂಕ್ತ ಕ್ರಮ ವಹಿಸದಿರಲು ಕಾರಣಗಳೇನು; | ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳಲ್ಲಿ ಕೆಲವು ಕಾಮಗಾರಿಗಳು ಈ ಕೆಳಕಂಡ ಕಾರಣಗಳಿಂದ ನಿಗಧಿತ ಅವಧಿಯೊಳಗೆ ಪೂರ್ಣಗೊಳಿಸಲು ಸಾಧ್ಯವಾಗದೇ ವಿಳಂಬವಾಗಿರುತ್ತದೆ.<br>• ಭೂಸ್ವಾಧೀನ ಪ್ರಕ್ರಿಯೆಯಲ್ಲಿನ ಸಮಸ್ಯೆಗಳು<br>• ವಿಳಂಬಿತ ಅರಣ್ಯ ತೀರುವಳಿ<br>• ವಿದ್ಯುತ್ ಮತ್ತು ನೀರು ಸರಬರಾಜು ಉಪಯುಕ್ತತೆಗಳ ಸ್ಥಳಾಂತರಿಸಲು ಅಗತ್ಯ ಅನುಮತಿಯನ್ನು ಸಂಬಂಧಪಟ್ಟ ಇಲಾಖೆಯಿಂದ ಪಡೆಯುವುದು ವಿಳಂಬವಾಗಿರುತ್ತದೆ.<br>• ಕಾನೂನು ಮತ್ತು ಸಂಹಿತೆ ಸಮಸ್ಯೆಗಳು.<br>• ಎರವಲು ಪ್ರದೇಶ (Borrow Area)/ ಗಣಿಕಾರಿಗೆ ಅನುಮತಿ<br>• ಅನಿರೀಕ್ಷಿತ ಮಳೆ<br>• ಕೋವಿಡ್-19<br>• ನ್ಯಾಯಾಲಯದಲ್ಲಿನ ತಡೆಯಾಜ್ಞೆ<br>• ರಸ್ತೆ ಕಾಮಗಾರಿಯಲ್ಲಿ ROB/RUB ಒಳಗೊಂಡಿದ್ದಾಗ ರೈಲ್ವೇ ಇಲಾಖೆಯಿಂದ ಸ್ಟ್ರಕ್ಚರಲ್ ಡ್ರಾಯಿಂಗ್ Temporary Arrangement Drawing (TAD) / General Arrangement Drawing (GAD) ಅನುಮೋದನೆಯಲ್ಲಿ ಆಗುವ ವಿಳಂಬ |
| ಇ) | ದೀರ್ಘಕಾಲದಿಂದ ನೆನೆಗುದಿಗೆ ಬಿದ್ದಿರುವ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಲು ಸರ್ಕಾರ ಈ ಕೂಡಲೇ ಅಗತ್ಯ ಕ್ರಮ ವಹಿಸುವುದೇ; | |

| | | |
|---|---|---|
| | | ಮುಂದುವರೆದು, ಕಾಮಗಾರಿಗಳನ್ನು ನಿಗಧಿತ ಅವಧಿಯೊಳಗೆ ಪೂರ್ಣಗೊಳಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br>1. ವಿಭಾಗ / ವೃತ್ತ /ವಲಯ ಮತ್ತು ಸರ್ಕಾರದ ಉನ್ನತ ಅಧಿಕಾರಿಗಳ ಮಟ್ಟದಲ್ಲಿ 15 ದಿವಸಗಳಿಗೊಮ್ಮೆ / ಮಾಹೆವಾರು ಸಮನ್ವಯ ಸಭೆಗಳನ್ನು ಸಂಬಂಧಪಟ್ಟ ಇಲಾಖೆಗಳೊಂದಿಗೆ ನಡೆಸಲಾಗುತ್ತಿದ್ದು, ಅಗತ್ಯ ಅನುಮತಿ/ತಿರುವಳಿಗಳನ್ನು ಅಗಿಂದಾಗ್ಗೆ ನೀಡಲು ಸೂಚಿಸಲಾಗುತ್ತಿದೆ. ಅಲ್ಲದೆ ಭೂಸ್ವಾಧೀನ ಕಾರ್ಯವನ್ನು ತ್ವರಿತಗತಿಯಲ್ಲಿ ಕೈಗೊಳ್ಳಲು ಸ್ಥಳೀಯ ಉಪವಿಭಾಗಾಧಿಕಾರಿಗಳು, ಕಂದಾಯ ಇಲಾಖೆ ರವರನ್ನು ಭೂಸ್ವಾಧೀನಾಧಿಕಾರಿಗಳನ್ನಾಗಿ ನೇಮಿಸಲಾಗುತ್ತಿದೆ.<br>2. ಗುತ್ತಿಗೆ ಒಪ್ಪಂದದಲ್ಲಿನ ಸಮಸ್ಯೆಗಳನ್ನು ಬಗೆಹರಿಸಲು ರಿಯಾಯಿತಿದಾರರು / ಗುತ್ತಿಗೆದಾರರೊಂದಿಗೆ ನಿಯಮಿತವಾಗಿ ಪರಿಶೀಲನಾ ಸಭೆಗಳನ್ನು ಸಹ ಕೈಗೊಳ್ಳಲಾಗುತ್ತಿದೆ.<br>3. ಅಲ್ಲದೇ, ಈ ಸಂಬಂಧ ಸರ್ಕಾರದ ಮಟ್ಟದಲ್ಲಿಯೂ ಇಲಾಖಾ ಸಚಿವರು, ಮುಖ್ಯ ಕಾರ್ಯದರ್ಶಿ ಹಾಗೂ ಪ್ರಧಾನ ಕಾರ್ಯದರ್ಶಿಯವರು ಸಂಬಂಧಪಟ್ಟ ವಿವಿಧ ಇಲಾಖೆಗಳೊಂದಿಗೆ ಸಭೆಗಳನ್ನು ನಡೆಸಿ, ಸೂಕ್ತ ನಿರ್ದೇಶನಗಳನ್ನು ನೀಡಲಾಗಿರುತ್ತದೆ. ಹಲವಾರು ಸಮಸ್ಯೆಗಳು ಇತ್ಯರ್ಥಗೊಂಡಿರುತ್ತವೆ. |

ಸಂಖ್ಯೆ: ಲೋಇ 117 ಸಿಎನ್‌ಹೆಚ್ 2025 (ಇ)

(ಸತೀಶ ಜಾರಕಿಹೊಳಿ)
ಲೋಕೋಪಯೋಗಿ ಸಚಿವರು